# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 91 |
| ಸದಸ್ಯರ ಹೆಸರು | : | ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 13.02.2024 |
| ಉತ್ತರಿಸುವ ಸಚಿವರು | : | ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು. |

| ಕ್ರ. ಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಯೋಜನೆಗಳ ಅಡಿಯಲ್ಲಿ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಬೆಳವಣಿಗೆಗೆ ನೀಡುತ್ತಿರುವ ಪ್ರೋತ್ಸಾಹ, ಸಹಾಯಧನ ಮತ್ತು ಇತರೆ ಸವಲತ್ತುಗಳು ಯಾವುವು: ಪೂರ್ಣ ಮಾಹಿತಿ ನೀಡುವುದು: | ರಾಜ್ಯದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಯೋಜನೆಗಳ ಅಡಿಯಲ್ಲಿ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಬೆಳವಣಿಗೆಗೆ ನೀಡುತ್ತಿರುವ ಪ್ರೋತ್ಸಾಹ, ಸಹಾಯಧನ ಮತ್ತು ಇತರೆ ಸವಲತ್ತುಗಳು ಈ ಕೆಳಗಿನಂತಿವೆ.<br><br>1. **ಕೇಂದ್ರ ಸರ್ಕಾರದ ಪ್ರಧಾನಮಂತ್ರಿಗಳ ಉದ್ಯೋಗ ಸೃಜನ ಯೋಜನೆಯಡಿ** ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಉತ್ಪಾದನಾ ಘಟಕಗಳಿಗೆ ಗರಿಷ್ಟ ಸಾಲ ರೂ.50 ಲಕ್ಷಗಳವರೆಗೆ ಸೇವಾಘಟಕಗಳಿಗೆ ರೂ.20 ಲಕ್ಷಗಳವರೆಗೆ ಬ್ಯಾಂಕ್‌ಗಳ ಮೂಲಕ ಸಾಲ ಸೌಲಭ್ಯ ಒದಗಿಸಿ ಸಣ್ಣ ಉದ್ಯಮಗಳನ್ನು ಸ್ಥಾಪಿಸಿ ಸ್ವಯಂ ಉದ್ಯೋಗ ಕೈಗೊಳ್ಳಲು ಅನುಕೂಲ ಒದಗಿಸಲಾಗುವುದು ಹಾಗೂ ಯೋಜನಾ ವೆಚ್ಚದ ಮೇಲೆ ಶೇ. 15 ರಿಂದ ಶೇ.35 ರವರೆಗೆ ಗರಿಷ್ಟ ರೂ.7.50 ಲಕ್ಷದಿಂದ ರೂ.17.50 ಲಕ್ಷದವರೆಗೆ ಸಹಾಯಧನ ನೀಡಲಾಗುತ್ತಿದೆ.<br>2. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ರೂ.5.00 ಕೋಟಿಗಳವರೆಗೆ ಸಾಲ ಪಡೆದು ನಿಗದಿತ ಸಮಯದಲ್ಲಿ ಮರು ಪಾವತಿ ಮಾಡಿದ ಅತಿ ಸಣ್ಣ ಮತ್ತು ಸಣ್ಣ ಕೈಗಾರಿಕಾ ಘಟಕಗಳಿಗೆ 5 ವರ್ಷಗಳ ಅವಧಿಗೆ ಶೇಕಡ 6 ರಂತೆ ಬಡ್ಡಿ ಸಹಾಯಧನ ನೀಡಲಾಗುವುದು.<br>3. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಉದ್ಯಮಶೀಲರಿಗೆ ವಿಶೇಷ ಘಟಕ ಉಪ ಯೋಜನೆ ಮತ್ತು ಗಿರಿಜನ ಉಪ ಯೋಜನೆಯಡಿಯಲ್ಲಿ ಶೇ 75 ರಿಯಾಯಿತಿ ದರದಲ್ಲಿ ಕೈಗಾರಿಕಾ ನಿವೇಶನಗಳನ್ನು ಮತ್ತು ಕೈಗಾರಿಕಾ ಶೆಡ್‌ಗಳನ್ನು ನೀಡಲಾಗುತ್ತಿದೆ. ನಿವೇಶನದ ಗರಿಷ್ಟ ವಿಸ್ತೀರ್ಣ 2 ಎಕರೆಗಳು.<br>4. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪ ಯೋಜನೆಯಡಿಯಲ್ಲಿ ಸ್ವಯಂ ಉದ್ಯೋಗ ಕೈಗೊಳ್ಳಲು ಬ್ಯಾಂಕಿನಿಂದ ಸಾಲ ಒದಗಿಸಿ ಯೋಜನಾ ವೆಚ್ಚದ ಮೇಲೆ ಶೇ 60 ರಷ್ಟು ಗರಿಷ್ಟ ರೂ.5.00 ಲಕ್ಷ ಸಹಾಯಧನ ನೀಡಲಾಗುತ್ತಿದೆ.<br>5. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಉದ್ಯಮಿದಾರರು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಪಡೆದು ಸ್ಥಾಪಿಸುವ ಘಟಕಗಳಿಗೆ ಗರಿಷ್ಟ ರೂ.10.00 ಕೋಟಿ ಯೋಜನಾ ವೆಚ್ಚದಲ್ಲಿ The Debt Equity Ratio 2:1 ಪ್ರಕಾರ (2/3 ರಷ್ಟು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಮತ್ತು 1/3 ಪ್ರವರ್ತಕರ ಬಂಡವಾಳ) ಘಟಕಕ್ಕೆ ಪ್ರವರ್ತಕ ಬಂಡವಾಳ ಹೂಡಿಕೆಯ 1/3 ರಲ್ಲಿ ಶೇ.50ರಷ್ಟು ಬಡ್ಡಿ ರಹಿತ ಗರಿಷ್ಟ ರೂ.75 ಲಕ್ಷ ಸಾಫ್ಟ್ ಸೀಡ್ ಕ್ಯಾಪಿಟಲ್ ಆರ್ಥಿಕ ಸಹಾಯ ನೀಡಲಾಗುತ್ತಿದೆ.<br>6. ಕರ್ನಾಟಕ ರಾಜ್ಯ ಕೈಗಾರಿಕಾ ನೀತಿ 2020-25 ರಂತೆ ಕೆಳಕಾಣಿಸಿದ ಪ್ರೋತ್ಸಾಹ ಮತ್ತು ರಿಯಾಯಿತಿ ಸೌಲಭ್ಯಗಳನ್ನು ಅರ್ಹ ಕೈಗಾರಿಕೆಗಳಿಗೆ ನೀಡಿ ಉತ್ತೇಜಿಸಲಾಗುತ್ತಿದೆ.<br>  1. ಮುದ್ರಾಂಕ ಶುಲ್ಕ ವಿನಾಯಿತಿ<br>  2. ನೋಂದಣಿ ಶುಲ್ಕ ರಿಯಾಯಿತಿ.<br>  3. ಬಂಡವಾಳ ಹೂಡಿಕೆ ಸಹಾಯಧನ<br>  4. ಕಿರು ಮತ್ತು ಸಣ್ಣ ಕೈಗಾರಿಕೆಗಳಿಗೆ ವಿದ್ಯುತ್ ಸಹಾಯಧನ<br>  5. ಭೂ ಪರಿವರ್ತನಾ ಶುಲ್ಕ ಮರುಪಾವತಿ.<br>  6. ರಫ್ತು ಆಧಾರಿತ ಘಟಕಗಳಿಗೆ ರಿಯಾಯಿತಿ. |

<table>
<tr>
<td></td>
<td></td>
<td>7. ತ್ಯಾಜ್ಯ ಸಂಸ್ಕರಣಾ ಘಟಕಗಳ ಸ್ಥಾಪನೆಗೆ ಸಹಾಯಧನ.<br>8. ವಿದ್ಯುತ್ ತೆರಿಗೆ ವಿನಾಯಿತಿ<br>9. ತಾಂತ್ರಿಕ ಉನ್ನತೀಕರಣ, ಗುಣಮಟ್ಟ ಪ್ರಮಾಣ ಪತ್ರ ಸಹಾಯಧನ<br>10. ಮಳೆನೀರು ಕೊಯ್ಲು / ಸಂರಕ್ಷಣೆ ಸಹಾಯಧನ<br>11. ತಂತ್ರಜ್ಞಾನ ಉನ್ನತೀಕರಣಕ್ಕೆ ಬಡ್ಡಿ ಸಹಾಯಧನ</td>
</tr>
<tr>
<td>ಆ)</td>
<td>ಈ ಪೈಕಿ ರಾಜ್ಯದಲ್ಲಿ ಅಸಪೈರ್ (A Scheme for Promotion of Innovation Rural Industries & Enterpreneurship) ಯೋಜನೆ ಅಡಿಯಲ್ಲಿ ಸ್ಥಾಪಿಸಿರುವ ಇನ್‌ಕ್ಯೂಬೇಷನ್ ಕೇಂದ್ರಗಳು ಯಾವುವು: ಮತ್ತು ಅವುಗಳ ಕಾರ್ಯನಿರ್ವಹಣೆ ಯಾವ ಹಂತದಲ್ಲಿದೆ: ಪೂರ್ಣ ಮಾಹಿತಿ ನೀಡುವುದು;</td>
<td>ASPIRE - "A Scheme for Promotion of Innovation Rural Industries & Enterpreneurship" ಯೋಜನೆಯು ಕೇಂದ್ರ ಸರ್ಕಾರದ್ದಾಗಿದ್ದು, ಕೇಂದ್ರ ಸರ್ಕಾರದ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಮಂತ್ರಾಲಯ ತಮ್ಮ ಅಧೀನದಲ್ಲಿರುವ ಕಛೇರಿಗಳಿಂದ ಅನುಷ್ಠಾನಗೊಳಿಸುತ್ತದೆ.<br>ಕೇಂದ್ರ ಸರ್ಕಾರದ ಅಂತರ್ಜಾಲದಲ್ಲಿ ಲಭ್ಯವಿರುವ ಮಾಹಿತಿಯ ಪ್ರಕಾರ ಕರ್ನಾಟಕದಲ್ಲಿ ಈ ಯೋಜನೆಯಡಿ 4 ಇನ್‌ಕ್ಯೂಬೇಷನ್ ಕೇಂದ್ರಗಳು ಮತ್ತು ಅವುಗಳ ಕಾರ್ಯನಿರ್ವಹಣೆ ವಿವರಗಳು ಈ ಕೆಳಗಿನಂತಿವೆ.
<table>
<tr><th>Sl. no</th><th>District</th><th>Centre</th><th>Activity</th></tr>
<tr><td>1</td><td>Uttara Kannada/ Dandeli</td><td>Visvesvaraya Technological University (VTU), Dandeli, Karnataka</td><td>CNC Technology</td></tr>
<tr><td>2</td><td>Chikballapura</td><td>SJCIT</td><td>Sector Agnostic</td></tr>
<tr><td>3</td><td>Bengaluru</td><td>Bangalore Bio innovation Centre, Bengaluru, Karnataka (Department of IT an BT)</td><td>Sector Agnostic</td></tr>
<tr><td>4</td><td>Bengaluru</td><td>Indian Institute of Plantation and Management, Bengaluru, Kamataka</td><td>Agriculture & Allied (Vermi-compost_Value Addition_Seed Bank)</td></tr>
</table>
</td>
</tr>
<tr>
<td>ಇ)</td>
<td>ಈ ಇನ್‌ಕ್ಯೂಬೇಷನ್ ಕೇಂದ್ರಗಳಲ್ಲಿ ಯಾವ ವಿಧದ ತರಬೇತಿ ನೀಡಲಾಗುತ್ತಿದೆ; ಇದುವರೆಗೆ ಯಾವ ವಿಧದ ಜನರಿಗೆ ತರಬೇತಿ ನೀಡಲಾಗಿದೆ? (ಪೂರ್ಣ ಮಾಹಿತಿ ನೀಡುವುದು)</td>
<td>ಕೇಂದ್ರ ಸರ್ಕಾರದ ಅಂತರ್ಜಾಲದಲ್ಲಿ ಲಭ್ಯವಿರುವ ಮಾಹಿತಿಯ ಪ್ರಕಾರ ಕರ್ನಾಟಕದಲ್ಲಿ ಈ ಇನ್‌ಕ್ಯೂಬೇಷನ್ ಕೇಂದ್ರಗಳಲ್ಲಿ ಈ ಕೆಳಗಿನ ವೃತ್ತಿಗಳಲ್ಲಿ ತರಬೇತಿಗೆ ಅವಕಾಶವಿರುತ್ತದೆ.
<table>
<tr><th>Sl. No</th><th>District</th><th>Centre</th><th>Activity</th><th>Incubates</th></tr>
<tr><td>1</td><td>Uttara Kannada/ Dandeli</td><td>Visvesvaraya Technological University (VTU), Dandeli, Karnataka</td><td>CNC Technology</td><td></td></tr>
<tr><td>2</td><td>Chikballapura</td><td>SJCIT</td><td>Sector Agnostic</td><td></td></tr>
<tr><td>3</td><td>Bengaluru</td><td>Bangalore Bio innovation Centre, Bengaluru, Karnataka (Department of IT and BT)</td><td>Sector Agnostic</td><td>32</td></tr>
<tr><td>4</td><td>Bengaluru</td><td>Indian Institute of Plantation and Management, Bengaluru, Kamataka</td><td>Agriculture & Allied (Vermi-compost Value Addition Seed Bank)</td><td>1</td></tr>
</table>
</td>
</tr>
</table>

ಸಿಐ 47 ಸಿಎಸ್‌ಸಿ 2024

**(ಶರಣಬಸಪ್ಪ ದರ್ಶನಾಪೂರ)**
ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ
ಉದ್ದಿಮೆಗಳ ಸಚಿವರು